ಕ್ರ. ಸಂ.	ರಸ್ತೆಯ ಹೆಸರು	ರಸ್ತೆಯ ಉದ್ದ (ಕಿ.ಮೀ)	ಅಂದಾಜು ಮೊತ್ತ (ಕೋಟಿಗಳಲ್ಲಿ) (ಬೀದರ್, ಔರಾದ್, ಭಾಲ್ಕಿ ಕ್ಷೇತ್ರ ಸೇರಿ)
1	ಕಮಲಾನಗರ–ಗೂನಳ್ಳಿ ರಾಜ್ಯ ಹೆದ್ದಾರಿ–4	30.00	43.11

ಈ) ಗುತ್ತಿಗೆ ನಿಯಮದ ಪ್ರಕಾರ ಈ ರಸ್ತೆಗಳ ಕಾಮಗಾರಿಗಳು 2009 ಆಗಸ್ಟ್ ಅಂತ್ಯಕ್ಕೆ ಪೂರ್ಣಗೊಳಿಸಬೇಕಾಗಿದೆ. ಇದರಲ್ಲಿ ಕೆಲವೊಂದು ಕಾಮಗಾರಿಗಳಿಗೆ ನಿಗದಿಪಡಿಸಿದ ಅವಧಿ ಮುಗಿದಿರುತ್ತದೆ. ಟೆಂಡರ್ ನಿಯಮಗಳ ಪ್ರಕಾರ ಗುತ್ತಿಗೆದಾರರಿಗೆ ಅಂತಿಮ ನೋಟೀಸು ನೀಡಿ, ಟೆಂಡರ್ ನಿಯಮಗಳನ್ವಯ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಉ) ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಮುಕ್ತಾಯಗೊಳ್ಳದಿದ್ದ ಪಕ್ಷದಲ್ಲಿ, ಟೆಂಡರ್ ನಿಯಾನುಸಾರ ರಿಸ್ಕ್ ಮತ್ತು ಕಾಸ್ಟ್ ಮೇಲೆ ಗುತ್ತಿಗೆಯನ್ನು ಮೊಟಕುಗೊಳಿಸುವ ಪ್ರಸ್ತಾವನೆಯನ್ನು ಅನುಮೋದಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಊ) ಟೆಂಡರ್ ಕಾರ್ಯಕ್ರಮ ಪಟ್ಟಿಯಂತೆ (PERT CHART) ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಮೇಲಿಂದ ಮೇಲೆ ಸೂಚನೆಗಳನ್ನು ನೀಡಿ ಕಾಮಗಾರಿಗಳನ್ನು ಮುಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಋ) ಪ್ರಗತಿಯಲ್ಲಿ ರಸ್ತೆ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲು ಕಾರ್ಯನಿರ್ವಾಹಕ ಇಂಜಿನೀಯರರು ಅವಶ್ಯಕತೆಗೆ ತಕ್ಕಂತೆ ಮೇಲಿಂದ ಮೇಲೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿರುತ್ತಾರೆ.

638 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ನಗರಾಭಿವೃದ್ಧಿ, ಕಾನೂನು ನ್ಯಾಯ ಮತ್ತು ಮಾನವ ಹಕ್ಕು ಹಾಗೂ ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ಪಟ್ಟಣಕ್ಕೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸುವ ಸಲುವಾಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು

ಒಳಚರಂಡಿ ಮುಂಡಳಿಯಿಂದ ಆರ್.ಸಿ.ಸಿ. ವೆಂಟೆಡ್ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಗಿದೆ.;

ಆ) ಇದರ ಅಂದಾಜು ವೆಚ್ಚವೆಷ್ಟು ಹಾಗೂ ಇದಕ್ಕಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಮತ್ತು ಖರ್ಚು ಮಾಡಿರುವ ಹಣದ ಮೊತ್ತವೆಷ್ಟು;

ಇ) ಈಗ ಕಾಮಗಾರಿಯು ಯಾವ ಹಂತದಲ್ಲಿದೆ;

ಈ) ಗುತ್ತಿಗೆ ಕರಾರು ನಿಯಮಗಳ ಪ್ರಕಾರ ಈ ಕಾಮಗಾರಿಯು ಎಂದು ಮುಕ್ತಾಯವಾಗಬೇಕಾಗಿತ್ತು;

ಉ) ಮುಕ್ತಾಯವಾಗದೇ ಇದ್ದಲ್ಲಿ ಇದಕ್ಕೆ ಕಾರಣಗಳೇನು;

ಊ) ನಿಯಮಾನುಸಾರ ಕಾಮಗಾರಿಯನ್ನು ಮುಕ್ತಾಯಗೊಳಿಸದೇ ವಿಳಂಬ ಮಾಡುತ್ತಿರುವವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು;

ಋ) ಭಾಲ್ಕಿ ಪಟ್ಟಣದಲ್ಲಿ ಕುಡಿಯುವ ನೀರಿನ ತೀವ್ರ ತೊಂದರೆ ಇರುವುದರಿಂದ ಆದಷ್ಟು ಶೀಘ್ರವಾಗಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರದ ಮುಂದಿರುವ ಕ್ರಮಗಳೇನು;

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕು ಹಾಗೂ ಸಂಸದೀಯ ವ್ಯವಹಾರಗಳ ಮತ್ತು ಶಾಸನ ಸಚಿವರು) :

ಅ) ಆರ್.ಸಿ.ಸಿ. ವೆಂಟೆಡ್ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಫೆಬ್ರವರಿ 2006ರಲ್ಲಿ ಪ್ರಾರಂಭಿಸಲಾಗಿದೆ.

ಆ) ಅಂದಾಜು ವೆಚ್ಚ ರೂ.125.81 ಲಕ್ಷಗಳು ಇದುವರೆವಿಗೂ ಪೂರ್ಣಗೊಂಡಿರುವ ಕಾಮಗಾರಿಯ ಮೊತ್ತ ರೂ.111.20 ಲಕ್ಷಗಳು.

ಇ) ಭಾಲ್ಕಿ ಪಟ್ಟಣದ ಕಲವಾಡಿ ಗ್ರಾಮದ ಹತ್ತಿರ ಕಾರಂಜಾ ನದಿಗೆ ಅಡ್ಡಲಾಗಿ ಆರ್.ಸಿ.ಸಿ. ವೆಂಟೆಡ್ ಬ್ಯಾರೇಜ್ ನಿರ್ಮಿಸುವ ಕಾಮಗಾರಿಯು ಶೇಕಡಾ 95% ರಷ್ಟು ಪೂರ್ಣಗೊಂಡಿರುತ್ತದೆ. ಖಾಲಿ ಉಳಿದ ಕಾಮಗಾರಿಗಳು ಪ್ರಗತಿಯಲ್ಲಿದೆ.

ಈ) ಈ ಕಾಮಗಾರಿಯು ಗುತ್ತಿಗೆ ಕರಾರಿನಂತೆ ಆಗಸ್ಟ್ 2006ರಲ್ಲಿ ಪೂರ್ಣಗೊಳ್ಳಬೇಕಾಗಿತ್ತು.

ಉ) ಮುಕ್ತಾಯವಾಗದಿರುವುದಕ್ಕೆ ಮುಖ್ಯ ಕಾರಣಗಳು:–

1) ಕಾರಂಜ ನದಿಯಲ್ಲಿ ಆಗಿಂದಾಗ್ಗೆ ಉಂಟಾಗುತ್ತಿರುವ ಅನಿರೀಕ್ಷಿತ ಪ್ರವಾಹಗಳು.

2) ಕಾರಂಜಾ ಜಲಾಶಯದಿಂದ ಭಾಲ್ಕಿ ಪಟ್ಟಣ ಹಾಗೂ ಬೀದರ ನಗರಕ್ಕೆ ಬೇಸಿಗೆಯಲ್ಲಿ ಕುಡಿಯುವ ನೀರಿಗಾಗಿ ನದಿಗೆ ನೀರು ಬಿಡುಗಡೆ ಮಾಡುತ್ತಿರುವುದು.

ಊ) ಟೆಂಡರ್ ನಿಯಮಾವಳಿಗಳ ಪ್ರಕಾರ ಗುತ್ತಿಗೆದಾರರಿಂದ ಕಾಮಗಾರಿಯನ್ನು ನಿಗಿದಿತ ಸಮಯದಲ್ಲಿ ಪೂರ್ಣಗೊಳಿಸಲು ಉಂಟಾಗಿರುವ ವಿಳಂಬಕ್ಕೆ ಗುತ್ತಿಗೆದಾರರ ಮೇಲೆ ಮಂಡಳಿಯು ದಂಡ ವಿಧಿಸುತ್ತದೆ.

ಋ) ಭಾಲ್ಕಿ ನೀರು ಸರಬರಾಜು ಯೋನೆಯಡಿಯಲ್ಲಿ ಬ್ಯಾರೇಜ್‌ನ ಬಾಕಿ ಉಳಿದಿರುವ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಮಂಡಳಿಯು ಕ್ರಮವಹಿಸಿದೆ.

1066 ಶ್ರೀ ಗೋಪಾಲಭಂಡಾರಿ ಹೆಚ್. : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಹೆದ್ದಾರಿ–17 ಮತ್ತು ರಾಷ್ಟ್ರೀಯ ಹೆದ್ದಾರಿ–13 ಇವುಗಳನ್ನು ಸಂಪರ್ಕ ಮಾಡುವ ತೀರ್ಥಹಳ್ಳಿ–ಆಗುಂಬೆ–ಹೆಬ್ರಿ–ಮಣಿಪಾಲ–ಉಡುಪಿ ರಸ್ತೆ ಇವುಗಳನ್ನು ಮೇಲ್ದರ್ಜೆಗೇರಿಸುವ ಹಾಗೂ ಆಗುಂಬೆ ಘಾಟ್‌ನಲ್ಲಿ ಪುನಃ ವಾಹನ ಸಂಚರಿಸಲು ಸರ್ಕಾರ ಕೈಗೊಂಡ ಕ್ರಮವೇನು;

ಆ) ಆಗುಂಬೆ–ಸೋಮೇಶ್ವರ–ವಲಿದ್ರಾತಿ–ಕಾರ್ಕಳ ರಸ್ತೆ ಕಿರಿದಾಗಿದ್ದು, ರಾಜ್ಯ ಹೆದ್ದಾರಿಯಾಗಿರುವ ಈ ರಸ್ತೆಯನ್ನು ಅಗಲಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ಬೆಳ್ಮಣ್–ಮುಂತೂರು–ಕಟೀಲು–ಬಜ್ಪೆ ರಸ್ತೆಗಳನ್ನು ಅಗಲಗೊಳಿಸುವ ಬಗ್ಗೆ ಸರ್ಕಾರದ ಕ್ರಮವೇನು;

ಈ) ಸುಬ್ರಹ್ಮಣ್ಯ, ಧರ್ಮಸ್ಥಳ, ಕಾರ್ಕಳ–ಉಡುಪಿ ರಸ್ತೆಯಲ್ಲಿ ಕಾರ್ಕಳಪಳ್ಳಿ ವೆಳ್ಳೆ ಉಡುಪಿ ಮಧ್ಯೆ ಅಗಲ ಕಿರಿದಾಗಿದ್ದು ರಸ್ತೆ ಅಗಲಗೊಳಿಸಿ ಡಾಂಬರೀಕರಣಗೊಳಿಸಲು ಸರ್ಕಾರ ಎಂದು ಕ್ರಮ ಕೈಗೊಳ್ಳುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ತೀರ್ಥಹಳ್ಳಿ–ಆಗುಂಬೆ–ಹೆಬ್ರಿ–ಮಣಿಪಾಲ–ಉಡುಪಿ ರಸ್ತೆಯು ಪಡುಬಿದ್ರೆ–ಚಿಕ್ಕಾಲಗುಡ್ಡ ರಾಜ್ಯ ಹೆದ್ದಾರಿ–1ರ ಭಾಗವಾಗಿದ್ದು, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಹಾದುಹೋಗುತ್ತದೆ.

ಈ ರಸ್ತೆಯು ಹಲವಾರು ಮೊನೆಚಾದ ತಿರುವುಗಳನ್ನು ಹೊಂದಿದ್ದು, ರಸ್ತೆಯ ಇಕ್ಕೆಲಗಳಲ್ಲಿ ರಕ್ಷಿತ ಅರಣ್ಯ ಪ್ರದೇಶವಿದ್ದು, ರಸ್ತೆಯ ಅಗಲೀಕರಣಕ್ಕೆ